<u>**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.**</u>

ಸಿ.ಸಿ. ನಂಃ 32/2021 ಸಿಡಬ್ಲೂ : 16 ಪಿಡಬ್ಲೂಃ 7

ಪ್ರಮಾಣವಚನ ಬೋಧಿಸಲಾಯಿತು ದಿಃ 06-03-2026

ಹೆಸರು : ರಾಜಶೇಖರ್

ತಂದೆ ಹೆಸರು : ವಿಟೋಬಾ

ವಯಸ್ಸು : 45 ವರ್ಷ

ಉದ್ಯೋಗ : ಪಿ ಐ, ಡಿ ಸಿ ಆರ್ ಇ, ಯಾದಗಿರಿ,

ವಾಸಸ್ಥಳ : ಕಲಬುರಗಿ

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು ಪೆಬ್ರವರಿ 2020 ರಿಂದ ಡಿಸೆಂಬರ್ 2021 ರವರೆಗೆ ಸಿ ಪಿ ಐ ಸೇಡಂ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.16-08-2020 ಸದರಿ ಪ್ರಕರಣದ ತನಿಖೆಯನ್ನು ವಹಿಸಿಕೊಂಡು ಸದರಿ ಪ್ರಕರಣದ ಆರೋಪಿತನಾದ ಚಂದ್ರ ಶೇಖರ್ ಈತನನ್ನು ದಸ್ತಗಿರಿ ಕ್ರಮವನ್ನು ಜರುಗಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿ. 16-08-2020 ರಂದು ಅಪಘಾತ ಪಡಿಸಿದ ಮೊಟಾರು ಸೈಕಲನ್ನು ಆರ್ ಟಿ ಓ ಪರೀಕ್ಷ ಮಾಡಿಸಿ ಇಂಡಿಮ್ಯುನಿಟಿ ಮುಚ್ಚಳಿಕೆಯ ಮೇಲೆ ಮಾಲಿಕರಿಗೆ ಬಿಡುಗಡೆ ಮಾಡಿರುತ್ತೇನೆ. ಸಾಕ್ಷಿಯು ಸದರಿ ಬಾಂಡನ್ನು ನೋಡಿ ಗುರುಸಿದ್ದು ಅದನ್ನು ನಿ ಪಿ 12ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 12(ಎ) ಎಂದು ಗುರುತಿಸಲಾಯಿತು. ಅದೇ ರೀತಿ ಸದರಿ ಮೊಟಾರು ಸೈಕಲಿನ ಎರಡು ಭಾವ ಚಿತ್ರವನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿ ಪಿ 13 ಮತ್ತು 14 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿ ಪಿ 13(ಎ) ಮತ್ತು 14(ಎ) ಎಂದು ಗುರುತಿಸಲಾಯಿತು. 10-09-2020 ರಂದು ಮೃತ ಪೂಜಾ ಇವಳ ಪಿ ಎಂ ವರದಿಯನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಪಿ ಎಂ ವರದಿಯನ್ನು ನೋಡಿ ಗುರುಸಿದ್ದು ಅದನ್ನು ಈಗಾಗಲೇ ನಿ ಪಿ 10 ಎಂದು ಗುರುತಿಸಾಗಿದೆ ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 10(ಎ) ಎಂದು ಗುರುತಿಸಲಾಯಿತು. ದಿ. 19-09-2020 ಎಂದು ಆರ್ ಟಿ ಓ ರವರಿಂದ

ವರದಿಯನ್ನು ಸ್ವೀಕರಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ಸದರಿ ವರದಿಯನ್ನು ನೋಡಿ ಗುರುಸಿದ್ದು ಅದನ್ನು ಈಗಾಗಲೇ ನಿ ಪಿ 11 ಎಂದು ಗುರುತಿಸಲಾಗಿದೆ ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 11(ಎ) ಎಂದು ಗುರುತಿಸಲಾಯಿತು.

**ಪಾಟಿ ಸವಾಲು ಃ ಆರೋಪಿ ಪರ ಶ್ರೀ ಟಿ ವಿ ಪಿ ವಕೀಲರಿಂದಃ**

ದಿ.16-08-2020 ಸದರಿ ಪ್ರಕರಣದ ತನಿಖೆಯನ್ನು ವಹಿಸಿಕೊಂಡು ಸದರಿ ಪ್ರಕರಣದ ಆರೋಪಿತನಾದ ಚಂದ್ರ ಶೇಖರ್ ಈತನನ್ನು ದಸ್ತಗಿರಿ ಕ್ರಮವನ್ನು ಜರುಗಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ದಿ. 16-08-2020 ರಂದು ಅಪಘಾತ ಪಡಿಸಿದ ಮೊಟಾರು ಸೈಕಲನ್ನು ಆರ್ ಟಿ ಓ ಪರೀಕ್ಷ ಮಾಡಿಸಿ ಇಂಡಿಮ್ನು ನಿಟಿ ಮುಚ್ಚಳಿಕೆಯ ಮೇಲೆ ಮಾಲಿಕರಿಗೆ ಬಿಡುಗಡೆ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. 10-09-2020 ರಂದು ಮೃತ ಪೂಜಾ ಇವಳ ಪಿ ಎಂ ವರದಿಯನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ದಿ. 19-09-2020 ಎಂದು ಆರ್ ಟಿ ಓ ರವರಿಂದ ವರದಿಯನ್ನು ಸ್ವೀಕರಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ.

(ಮರುವಿಚಾರಣೆ ಇಲ್ಲ)

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**